December 18, 2025

# ಕೃತಕ ಬುದ್ಧಿಮತ್ತೆ, ಕ್ಲೌಡ್ ಕಂಪ್ಯೂಟಿಂಗ್ ಕಾರ್ಯಾಗಾರ ಯಶಸ್ವಿ



»ಜನಮಾಧ್ಯಮ, ಹಳಿಯಾಳ: ವಿ ಡಿ ಐ ಟಿ ಕಂಪ್ಯೂಟರ್ ಸೈನ್ಸ್ ಮತ್ತು ಎ ಐ ಎಂ ಎಲ್ ವಿಭಾಗದ ಜಂಟಿ ಸಹಯೋಗದಲ್ಲಿ, ಆಧುನಿಕ ತಂತ್ರಜ್ಞಾನವಾದ ಕ್ಲೌಡ್ ಕಂಪ್ಯೂಟರ್ ಕುರಿತಾಗಿ ಮಾಹಿತಿ ನೀಡುವ ಕಾರ್ಯಕ್ರಮವನ್ನು ಡಿ.16 ರಂದು ಆಯೋಜಿಸಲಾಗಿತ್ತು. ಬೆಂಗಳೂರಿನ ಎಲಿ ಲಿಲ್ಲಿ ಸಂಸ್ಥೆಯ ವಿನಾಯಕ ಪೋತೆ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿ ವಿದ್ಯಾರ್ಥಿಗಳಿಗೆ ಕ್ಲೌಡ್ ಕಂಪ್ಯೂಟಿಂಗ್ ತಂತ್ರಜ್ಞಾನದ ಮಾಹಿತಿ ನೀಡಿದರು. ಕ್ಲೌಡ್ ಕಂಪ್ಯೂಟಿಂಗ್ ನ ಮಹತ್ವ, ಉಪಯೋಗ ಹಾಗೂ ಕೈಗಾರಿಕಾ ವಲಯದಲ್ಲಿ ತಂತ್ರಜ್ಞಾನವನ್ನು ಹೇಗೆ ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಡಿ.17ರಂದು ಕೃತಕ ಬುದ್ಧಿಮತ್ತೆ ಕುರಿತಾಗಿ ಒಂದು ದಿನದ ಕಾರ್ಯಾಗಾರ ಹಮ್ಮಿಕೊಳ್ಳಲಾಗಿತ್ತು. ಸಂಪನ್ಮೂಲ ವ್ಯಕ್ತಿಯಾಗಿ ಬೆಂಗಳೂರಿನ ಸಾಫ್ಟ್‌ವೇರ್ ಸಂಸ್ಥೆ ವ್ಯವಸ್ಥಾಪಕ ಅನುಪ್ ಕುಲಕರ್ಣಿ ಆಗಮಿಸಿ, ವಿದ್ಯಾರ್ಥಿಗಳು ತರಗತಿಯಲ್ಲಿ ಕಲಿಯುವ ವಿಷಯಗಳು ಹಾಗೂ ಕೈಗಾರಿಕಾ ವಲಯ ಬಯಸುವ ಕೌಶಲ್ಯಗಳ ತುಲನೆ ಮಾಡುತ್ತ, ಉತ್ತಮ ಉದ್ಯೋಗಾವಕಾಶಗಳನ್ನು ಹೊಂದಲು ಆಧುನಿಕ ತಂತ್ರಜ್ಞಾನವನ್ನು ಕಲಿಯುವುದು ಅವಶ್ಯಕ ಎಂದು ಹೇಳಿದರು. ಕೃತಕ ಬುದ್ಧಿಮತ್ತೆ ತಂತ್ರಜ್ಞಾನವನ್ನು ಕೈಗಾರಿಕಾ ವಲಯದಲ್ಲಿ ಸಮರ್ಪಕವಾಗಿ ಬಳಕೆ ಮಾಡುತ್ತಿರುವುದನ್ನು ಉದಾಹರಣೆ ಸಹಿತ ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ, ವಿದ್ಯಾರ್ಥಿಗಳು ಉತ್ತಮ ಅಂಕ ಪಡೆಯುವದರೊಂದಿಗೆ ಕೌಶಲ್ಯ ಅಭಿವೃದ್ಧಿಗೆ ಒತ್ತು ಕೊಡುವಂತೆ ಸಲಹೆ ನೀಡಿದರು. 150ಕ್ಕೂ ಅಧಿಕ ವಿದ್ಯಾರ್ಥಿಗಳು ಸಕ್ರಿಯವಾಗಿ ಪಾಲ್ಗೊಂಡಿದ್ದರು.

# ಕೃತಕ ಬುದ್ಧಿಮತ್ತೆ ಹಾಗೂ ಕ್ಲೌಡ್ ಕಂಪ್ಯೂಟಿಂಗ್ ಕಾರ್ಯಗಾರ ಯಶಸ್ವಿ



**ಶುಭೋದಯ ವಾರ್ತೆ: (ಡಿ.18)** ಕೆಎಲ್ ಎಸ್ ವಿ ಡಿ ಐ ಟಿ ಹಳಿಯಾಳದ ಕಂಪ್ಯೂಟರ್ ಸೈನ್ಸ್ ಮತ್ತು ಕಂಪ್ಯೂಟರ್ ಸೈನ್ಸ್ (ಎ ಐ ಎಂ ಎಲ್ ) ವಿಭಾಗದ ಜಂಟಿ ಸಯೋಗದಲ್ಲಿ ಆಧುನಿಕ ತಂತ್ರಜ್ಞಾನವಾದ ಕ್ಲೌಡ್ ಕಂಪ್ಯೂಟರ್ ಕುರಿತಾಗಿ ಮಾಹಿತಿ ನೀಡುವ ಕಾರ್ಯಕ್ರಮವನ್ನು ಡಿಸೆಂಬರ್ 16ರಂದು ಆಯೋಜಿಸಲಾಗಿತ್ತು. ಬೆಂಗಳೂರಿನ ಎಲಿಲಿಲ್ಲಿ ಸಂಸ್ಥೆಯ ವಿನಾಯಕ ಪ್ರೋತೆ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿ ವಿದ್ಯಾರ್ಥಿಗಳಿಗೆ ಕ್ಲೌಡ್ ಕಂಪ್ಯೂಟಿಂಗ್ ತಂತ್ರಜ್ಞಾನದ ಕುರಿತಾಗಿ ಮಾಹಿತಿ ನೀಡಿದರು. ಕ್ಲೌಡ್ ಕಂಪ್ಯೂಟಿಂಗ್ ನ ಮಹತ್ವ, ಉಪಯೋಗ, ಹಾಗೂ ಕೈಗಾರಿಕಾ ವಲಯದಲ್ಲಿ ತಂತ್ರಜ್ಞಾನವನ್ನು ಹೇಗೆ ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಡಿಸೆಂಬರ್ 17ರಂದು ಕೃತಕ ಬುದ್ಧಿಮತ್ತೆ ಕುರಿತಾಗಿ ತಿಳಿಸುವ ಒಂದು ದಿನದ ಕಾರ್ಯಗಾರವನ್ನು ಹಮ್ಮಿಕೊಳ್ಳಲಾಗಿತ್ತು. ಸಂಪನ್ಮೂಲ ವ್ಯಕ್ತಿಯಾಗಿ ಈ ಕಾರ್ಯಕ್ರಮಕ್ಕೆ ಬೆಂಗಳೂರಿನ ಸಾಫ್ಟ್ವೇರ್ ಸಂಸ್ಥೆಯ ವ್ಯವಸ್ಥಾಪಕ ಅನುಪ್ ಕುಲಕರ್ಣಿ ಆಗಮಿಸಿದ್ದರು. ವಿದ್ಯಾರ್ಥಿಗಳು ತರಗತಿಯಲ್ಲಿ ಕಲಿಯುವ ವಿಷಯಗಳು ಹಾಗೂ ಕೈಗಾರಿಕಾ ವಲಯ ಬಯಸುವ ಕೌಶಲ್ಯಗಳ ತುಲನೆ ಮಾಡುತ್ತ, ಉತ್ತಮ ಉದ್ಯೋಗಾವಕಾಶಗಳನ್ನು ಹೊಂದಲು ಆಧುನಿಕ ತಂತ್ರಜ್ಞಾನವನ್ನು ಕಲಿಯುವುದು ಅವಶ್ಯಕ ಎಂದು ಹೇಳಿದರು. ಕೃತಕ ಬುದ್ಧಿಮತ್ತೆ ತಂತ್ರಜ್ಞಾನವನ್ನು ಕೈಗಾರಿಕಾ ವಲಯದಲ್ಲಿ ಸಮರ್ಪಕವಾಗಿ ಬಳಕೆ ಮಾಡುತ್ತಿರುವುದನ್ನು ಉದಾಹರಣೆ ಸಹಿತ ವಿವರಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ, ವಿದ್ಯಾರ್ಥಿಗಳು ಉತ್ತಮ ಅಂಕ ಪಡೆಯುವದರೊಂದಿಗೆ ಕೌಶಲ್ಯ ಅಭಿವೃದ್ಧಿಗೆ ಒತ್ತು ಕೊಡುವಂತೆ ಸಲಹೆ ನೀಡಿದರು. ಈ ಕಾರ್ಯಕ್ರಮಗಳನ್ನು ವಿಭಾಗ ಮುಖ್ಯಸ್ಥರುಗಳಾದ ಡಾ. ವೆಂಕಟೇಶ ಶಂಕರ್ ಹಾಗೂ ಡಾ. ಪೂರ್ಣಿಮ ರಾಯ್ಕರ್ ಆಯೋಜಿಸಿದ್ದರು. 150ಕ್ಕೂ ಅಧಿಕ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದರು.

# ಉತ್ತಮ ಉದ್ಯೋಗಾವಕಾಶ ಹೊಂದಲು ಆಧುನಿಕ ತಂತ್ರಜ್ಞಾನ ಕಲಿಯುವುದು ಅವಶ್ಯಕ



PREV NEXT

ಹಳಿಯಾಳ, ಡಿ. 17: ಕೆಎಲ್ ಎಸ್‌ವಿಡಿಐಟಿ ಹಳಿಯಾಳದ ಕಂಪ್ಯೂಟರ್ ಸೈನ್ಸ್ ಮತ್ತು ಕಂಪ್ಯೂಟರ್ ಸೈನ್ಸ್ (ಎಐಎಂಎಲ್ ) ವಿಭಾಗದ ಜಂಟಿ ಸಯೋಗದಲ್ಲಿ ಆಧುನಿಕ ತಂತ್ರಜ್ಞಾನವಾದ ಕ್ಲೌಡ್ ಕಂಪ್ಯೂಟರ್ ಕುರಿತಾಗಿ ಮಾಹಿತಿ ನೀಡುವ ಕಾರ್ಯಕ್ರಮವನ್ನು ಡಿಸೆಂಬರ್ 16ರಂದು ಆಯೋಜಿಸಲಾಗಿತ್ತು.

ಬೆಂಗಳೂರಿನ ಎಲಿ ಲಿಲ್ಲಿ ಸಂಸ್ಥೆಯ ವಿನಾಯಕ ಪೋತೆ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿ ವಿದ್ಯಾರ್ಥಿಗಳಿಗೆ ಕ್ಲೌಡ್ ಕಂಪ್ಯೂಟಿಂಗ್ ತಂತ್ರಜ್ಞಾನದ ಕುರಿತಾಗಿ ಮಾಹಿತಿ ನೀಡಿದರು. ಕ್ಲೌಡ್ ಕಂಪ್ಯೂಟಿಂಗ್ ನ ಮಹತ್ವ, ಉಪಯೋಗ, ಹಾಗೂ ಕೈಗಾರಿಕಾ ವಲಯದಲ್ಲಿ ತಂತ್ರಜ್ಞಾನವನ್ನು ಹೇಗೆ ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಡಿಸೆಂಬರ್ 17ರಂದು ಕೃತಕ ಬುದ್ಧಿಮತ್ತೆ ಕುರಿತಾಗಿ ತಿಳಿಸುವ ಒಂದು ದಿನದ ಕಾರ್ಯಗಾರವನ್ನು ಹಮ್ಮಿಕೊಳ್ಳಲಾಗಿತ್ತು. ಸಂಪನ್ಮೂಲ ವ್ಯಕ್ತಿಯಾಗಿ ಈ ಕಾರ್ಯಕ್ರಮಕ್ಕೆ ಬೆಂಗಳೂರಿನ ಸಾಫ್ಟ್‌ವೇರ್ ಸಂಸ್ಥೆಯ ವ್ಯವಸ್ಥಾಪಕ ಅನುಪ್ ಕುಲಕರ್ಣಿ ಆಗಮಿಸಿದ್ದರು. ವಿದ್ಯಾರ್ಥಿಗಳು ತರಗತಿಯಲ್ಲಿ ಕಲಿಯುವ ವಿಷಯಗಳು ಹಾಗೂ ಕೈಗಾರಿಕಾ ವಲಯ ಬಯಸುವ ಕೌಶಲ್ಯಗಳ ತುಲನೆ ಮಾಡುತ್ತ, ಉತ್ತಮ ಉದ್ಯೋಗಾವಕಾಶಗಳನ್ನು ಹೊಂದಲು ಆಧುನಿಕ ತಂತ್ರಜ್ಞಾನವನ್ನು ಕಲಿಯುವುದು ಅವಶ್ಯಕ ಎಂದು ಹೇಳಿದರು. ಕೃತಕ ಬುದ್ಧಿಮತ್ತೆ ತಂತ್ರಜ್ಞಾನವನ್ನು ಕೈಗಾರಿಕಾ ವಲಯದಲ್ಲಿ ಸಮರ್ಪಕವಾಗಿ ಬಳಕೆ ಮಾಡುತ್ತಿರುವುದನ್ನು ಉದಾಹರಣೆ ಸಹಿತ ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ, ವಿದ್ಯಾರ್ಥಿಗಳು ಉತ್ತಮ ಅಂಕ ಪಡೆಯುವದರೊಂದಿಗೆ ಕೌಶಲ್ಯ ಅಭಿವೃದ್ಧಿಗೆ ಒತ್ತು ಕೊಡುವಂತೆ ಸಲಹೆ ನೀಡಿದರು.

ಈ ಕಾರ್ಯಕ್ರಮಗಳನ್ನು ವಿಭಾಗ ಮುಖ್ಯಸ್ಥರುಗಳಾದ ಡಾ. ವೆಂಕಟೇಶ ಶಂಕರ್ ಹಾಗೂ ಡಾ. ಪೂರ್ಣಿಮ ರಾಯ್ಕರ್ ಆಯೋಜಿಸಿದ್ದರು. 150ಕ್ಕೂ ಅಧಿಕ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ


Powered By KHUSHIHOST ® | License - ePaperCloud.com

# ಕೃತಕ ಬುದ್ಧಿಮತ್ತೆ, ಕ್ಲೌಡ್ ಕಂಪ್ಯೂಟಿಂಗ್ ಕಾರ್ಯಾಗಾರ ಯಶಸ್ವಿ




ಹಳಿಯಾಳ: ಕೆಎಲ್ಎಸ್ ವಿಡಿಐಟಿ ಹಳಿಯಾಳದ ಕಂಪ್ಯೂಟರ್ ಸೈನ್ಸ್ ಮತ್ತು ಕಂಪ್ಯೂಟರ್ ಸೈನ್ಸ್ (ಎ ಐ ಎಂ ಎಲ್ ) ವಿಭಾಗದ ಜಂಟಿ ಸಯೋಗದಲ್ಲಿ ಆಧುನಿಕ ತಂತ್ರಜ್ಞಾನವಾದ ಕ್ಲೌಡ್ ಕಂಪ್ಯೂಟರ್ ಕುರಿತಾಗಿ ಮಾಹಿತಿ ನೀಡುವ ಕಾರ್ಯಕ್ರಮವನ್ನು ಡಿಸೆಂಬರ್ 16ರಂದು ಆಯೋಜಿಸಲಾಗಿತ್ತು. ಬೆಂಗಳೂರಿನ ಎಲಿ ಲಿಲ್ಲಿ ಸಂಸ್ಥೆಯ ವಿನಾಯಕ ಪೋತೆ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿ ವಿದ್ಯಾರ್ಥಿಗಳಿಗೆ ಕ್ಲೌಡ್ ಕಂಪ್ಯೂಟಿಂಗ್ ತಂತ್ರಜ್ಞಾನದ ಕುರಿತಾಗಿ ಮಾಹಿತಿ ನೀಡಿದರು. ಕ್ಲೌಡ್ ಕಂಪ್ಯೂಟಿಂಗ್ ನ ಮಹತ್ವ, ಉಪಯೋಗ, ಹಾಗೂ ಕೈಗಾರಿಕಾ ವಲಯದಲ್ಲಿ ತಂತ್ರಜ್ಞಾನವನ್ನು ಹೇಗೆ ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಡಿಸೆಂಬರ್ 17ರಂದು ಕೃತಕ ಬುದ್ಧಿಮತ್ತೆ ಕುರಿತಾಗಿ ತಿಳಿಸುವ ಒಂದು ದಿನದ ಕಾರ್ಯಗಾರವನ್ನು ಹಮ್ಮಿಕೊಳ್ಳಲಾಗಿತ್ತು. ಸಂಪನ್ಮೂಲ ವ್ಯಕ್ತಿಯಾಗಿ ಈ ಕಾರ್ಯಕ್ರಮಕ್ಕೆ ಬೆಂಗಳೂರಿನ ಸಾಫ್ಟ್ವೇರ್ ಸಂಸ್ಥೆಯ ವ್ಯವಸ್ಥಾಪಕ ಅನುಪ್ ಕುಲಕರ್ಣಿ ಆಗಮಿಸಿದ್ದರು. ವಿದ್ಯಾರ್ಥಿಗಳು ತರಗತಿಯಲ್ಲಿ ಕಲಿಯುವ ವಿಷಯಗಳು ಹಾಗೂ ಕೈಗಾರಿಕಾ ವಲಯ ಬಯಸುವ ಕೌಶಲ್ಯಗಳ ತುಲನೆ ಮಾಡುತ್ತ, ಉತ್ತಮ ಉದ್ಯೋಗಾವಕಾಶಗಳನ್ನು ಹೊಂದಲು ಆಧುನಿಕ ತಂತ್ರಜ್ಞಾನವನ್ನು ಕಲಿಯುವುದು ಅವಶ್ಯಕ ಎಂದು ಹೇಳಿದರು. ಕೃತಕ ಬುದ್ಧಿಮತ್ತೆ ತಂತ್ರಜ್ಞಾನವನ್ನು ಕೈಗಾರಿಕಾ ವಲಯದಲ್ಲಿ ಸಮರ್ಪಕವಾಗಿ ಬಳಕೆ ಮಾಡುತ್ತಿರುವುದನ್ನು ಉದಾಹರಣೆ ಸಹಿತ ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ, ವಿದ್ಯಾರ್ಥಿಗಳು ಉತ್ತಮ ಅಂಕ ಪಡೆಯುವದರೊಂದಿಗೆ ಕೌಶಲ್ಯ ಅಭಿವೃದ್ಧಿಗೆ ಒತ್ತು ಕೊಡುವಂತೆ ಸಲಹೆ ನೀಡಿದರು.

ಈ ಕಾರ್ಯಕ್ರಮಗಳನ್ನು ವಿಭಾಗ ಮುಖ್ಯಸ್ಥರುಗಳಾದ ಡಾ. ವೆಂಕಟೇಶ ಶಂಕರ್ ಹಾಗೂ ಡಾ. ಪೂರ್ಣಿಮ ರಾಯ್ಕರ್ ಆಯೋಜಿಸಿದ್ದರು. 150ಕ್ಕೂ ಅಧಿಕ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದರು.

# ಹಳಿಯಾಳ: ಕೃತಕ ಬುದ್ಧಿಮತ್ತೆ-ಕ್ಲೌಡ್ ಕಂಪ್ಯೂಟಿಂಗ್ ಕಾರ್ಯಾಗಾರ ಯಶಸ್ವಿ



**• ತತ್ವನಿಷ್ಠ, ಹಳಿಯಾಳ:** ಕೆಎಲ್ಎಸ್ ವಿ.ಡಿ.ಐ.ಟಿ. ಹಳಿಯಾಳದ ಕಂಪ್ಯೂಟರ್ ಸೈನ್ಸ್ ಹಾಗೂ ಕಂಪ್ಯೂಟರ್ ಸೈನ್ಸ್ (ಎಐಎಂಎಲ್) ವಿಭಾಗಗಳ ಸಂಯುಕ್ತ ಆಶ್ರಯದಲ್ಲಿ ಡಿ.16 ಹಾಗೂ 17ರಂದು ಆಧುನಿಕ ತಂತ್ರಜ್ಞಾನ ಕುರಿತ ಎರಡು ದಿನಗಳ ಕಾರ್ಯಾಗಾರ ಯಶಸ್ವಿಯಾಗಿ ನಡೆಯಿತು.

ಡಿ. 16ರಂದು ಆಯೋಜಿಸಲಾದ ಕ್ಲೌಡ್ ಕಂಪ್ಯೂಟಿಂಗ್ ಕಾರ್ಯಾಗಾರದಲ್ಲಿ ಬೆಂಗಳೂರಿನ ಎಲಿ ಲಿಲ್ಲಿ ಸಂಸ್ಥೆಯ ವಿನಾಯಕ ಪೋತೆ ಸಂಪನ್ಮೂಲ ವ್ಯಕ್ತಿಯಾಗಿ ಪಾಲ್ಗೊಂಡು, ಕ್ಲೌಡ್ ಕಂಪ್ಯೂಟಿಂಗ್‌ನ ಮಹತ್ವ, ಉಪಯೋಗಗಳು ಹಾಗೂ ಕೈಗಾರಿಕಾ ವಲಯದಲ್ಲಿ ಅದರ ಬಳಕೆಯ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

ಡಿ. 17ರಂದು ಕೃತಕ ಬುದ್ಧಿಮತ್ತೆ ಕುರಿತು ಒಂದು ದಿನದ ಕಾರ್ಯಾಗಾರ ನಡೆಯಿತು. ಬೆಂಗಳೂರಿನ ಸಾಫ್ಟ್‌ವೇರ್ ಸಂಸ್ಥೆಯ ವ್ಯವಸ್ಥಾಪಕ ಅನುಪ್ ಕುಲಕರ್ಣಿ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿ, ಪಠ್ಯಕ್ರಮ ಮತ್ತು ಕೈಗಾರಿಕಾ ವಲಯದ ಅಗತ್ಯ ಕೌಶಲ್ಯಗಳ ನಡುವಿನ ಅಂತರವನ್ನು ವಿವರಿಸಿದರು. ಉತ್ತಮ ಉದ್ಯೋಗಾವಕಾಶಗಳಿಗಾಗಿ ಆಧುನಿಕ ತಂತ್ರಜ್ಞಾನ ಕಲಿಕೆ ಅವಶ್ಯಕ ಎಂದು ಅವರು ಅಭಿಪ್ರಾಯಪಟ್ಟರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ವಿ.ಎ. ಕುಲಕರ್ಣಿ, ವಿದ್ಯಾರ್ಥಿಗಳು ಅಂಕಗಳ ಜೊತೆಗೆ ಕೌಶಲ್ಯ ಅಭಿವೃದ್ಧಿಗೂ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು. ವಿಭಾಗ ಮುಖ್ಯಸ್ಥರಾದ ಡಾ. ವೆಂಕಟೇಶ ಶಂಕರ್ ಹಾಗೂ ಡಾ. ಪೂರ್ಣಿಮ ರಾಯ್ಕರ್ ಕಾರ್ಯಕ್ರಮಗಳನ್ನು ಆಯೋಜಿಸಿದ್ದರು. 150ಕ್ಕೂ ಅಧಿಕ ವಿದ್ಯಾರ್ಥಿಗಳು ಕಾರ್ಯಾಗಾರದಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದರು.